# Bangalore
# Regional News
# 12.09.2026 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಹೊರಗುತ್ತಿಗೆ ಆಧಾರದಲ್ಲಿ ಪಶು ವೈದ್ಯರ ನೇಮಕಕ್ಕೆ ಚಿಂತನೆ ; ಪಶು ಸಂಗೋಪನಾ ಸಚಿವ ಸಿ.ಪುಟ್ಟರಂಗ ಶೆಟ್ಟಿ ಸ್ಪಷ್ಟನೆ
2. ಜಾರಿ ನಿರ್ದೇಶನಾಲಯದ ಆರೋಪ ಹಿನ್ನೆಲೆ ; ಸಚಿವ ಸತೀಶ್ ಜಾರಕಿಹೊಳಿ ರಾಜಿನಾಮೆಗೆ ಬಿಜೆಪಿ ಆಗ್ರಹ
3. ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ಬಳಿ ಕೃಷಿ ಇಲಾಖೆ ಅಧಿಕಾರಿಗಳ ದಾಳಿ ; ಸಬ್ಸಿಡಿ ರಸಗೊಬ್ಬರ ಜಪ್ತಿ
4. ಪ್ರಸಕ್ತ ಸಾಲಿನಲ್ಲಿ ಎಂಟು ಸಾವಿರದ ೭೩ ಕೋಟಿ ರೂಪಾಯಿ ದಾಖಲೆ ವಹಿವಾಟು ನಡೆಸಿದ ವಿಜಯಪುರ ಜಿಲ್ಲಾಕೇಂದ್ರ ಸಹಕಾರಿ ಬ್ಯಾಂಕ್

<><><><>

ಬಿಜೆಪಿ ಸರ್ಕಾರದ ಅವಧಿಯಲ್ಲಿ ಪಶು ವೈದ್ಯಾಧಿಕಾರಿಗಳ ನೇಮಕಾತಿ ಹಗರಣ ನಡೆದಿದೆ ಎಂದು ಪಶು ಸಂಗೋಪನಾ ಸಚಿವ ಸಿ.ಪುಟ್ಟರಂಗಶೆಟ್ಟಿ ತಿಳಿಸಿದ್ದಾರೆ. ಚಾಮರಾಜನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೊರಗುತ್ತಿಗೆ ಆಧಾರದಲ್ಲಿ ಪಶು ವೈದ್ಯರ ನೇಮಕಕ್ಕೆ ಚಿಂತನೆ ನಡೆಸಲಾಗಿದೆ ಎಂದು ಹೇಳಿದ್ದಾರೆ. ಏಕಾಏಕಿ ನೇಮಕಾತಿಯನ್ನು ರದ್ದುಪಡಿಸಲು ಸಾಧ್ಯವಿಲ್ಲ ಎಂದು ತಿಳಿಸಿದ ಅವರು, ತನಿಖೆಯ ಬಳಿಕ ಕಾನೂನಿನ ಚೌಕಟ್ಟಿನೊಳ್ಳಗೆ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ, ಬರ ಪರಿಸ್ಥಿತಿ ಬಗ್ಗೆ ಪ್ರತಿಕ್ರಿಯಿಸಿದ ಅವರು, ಶೀಘ್ರವೇ ಜಿಲ್ಲೆಯಲ್ಲಿ ಮೇವು ಕೇಂದ್ರಗಳನ್ನು ತೆರೆಯಲಾಗುವುದು ಎಂದು ಹೇಳಿದ್ದಾರೆ.

<><><><>

ಲಂಚಪಾವತಿ, ವಿದೇಶಿ ಹೂಡಿಕೆಗಳು ಮತ್ತು ಗಣಿಗಾರಿಕೆ ಆಸ್ತಿಗಳಿಗೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಮಾಡಿರುವ ಆರೋಪಗಳನ್ನು ಉಲ್ಲೇಖಿಸಿ ಸಚಿವ ಸತೀಶ್ ಜಾರಕಿಹೊಳಿ ರಾಜೀನಾಮೆಗೆ ಬಿಜೆಪಿ ಆಗ್ರಹಿಸಿದೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಪ್ರತಿಪಕ್ಷ ನಾಯಕ ಆರ್.ಅಶೋಕ, ಸಚಿವ ಸತೀಶ್ ಜಾರಕಿಹೊಳಿ, ಲೋಕೋಪಯೋಗಿ ಇಲಾಖೆ ಕಮಿಷನ್ ಹಣದಲ್ಲಿ ಆಫ್ರಿಕಾದ ಚಿನ್ನದ ಗಣಿ ಕಂಪನಿಯಲ್ಲಿ ಶೇಕಡ ೪೦ರಷ್ಟು ಪಾಲು ಖರೀದಿ ಮಾಡಿರುವುದು ಇಡಿ ತನಿಖೆಯಲ್ಲಿ ಬಯಲಾಗಿದೆ ಎಂದು ಆರೋಪಿಸಿದ್ದಾರೆ. ಇಡಿ ತನಿಖೆ ಪೂರ್ಣವಾಗುವವರೆಗೂ ಸಚಿವ

ಸತೀಶ್ ಜಾರಕಿಹೊಳಿ ಅವರನ್ನು ಸಂಪುಟದಿಂದ ಹೊರಗಿಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಆಗ್ರಹಿಸಿದ್ದಾರೆ. ಇದೇ ವೇಳೆ ಸರ್ಕಾರದ ಅಸಮರ್ಥತೆ ಮತ್ತು ಬೇಜವಾಬ್ದಾರಿತನದಿಂದ ಇಂದು ರಾಜ್ಯ ವಿದ್ಯುತ್ ಕಣ್ಣಾಮುಚ್ಚಾಲೆಯಿಂದ ತತ್ತರಿಸಿ ಹೋಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಉಚಿತ ವಿದ್ಯುತ್ ಎಂದು ಗ್ಯಾರಂಟಿ ನೀಡಿದ ಸರ್ಕಾರ ಉಚಿತ ಕತ್ತಲೆಯನ್ನು ಗ್ಯಾರಂಟಿಯಾಗಿ ನೀಡಿದೆ ಎಂದು ವ್ಯಂಗ್ಯವಾಡಿದ್ದಾರೆ.

<><><>

ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ಬಳಿ ಸುಮಾರು ೧೮ ಲಕ್ಷ ರೂಪಾಯಿ ಮೌಲ್ಯದ ೬೮೦ ಚೀಲ ಸಬ್ಸಿಡಿ ರಸಗೊಬ್ಬರವನ್ನು ಕೃಷಿ ಇಲಾಖೆ ಜಪ್ತಿ ಮಾಡಿದೆ. ಈ ದಾಸ್ತಾನನ್ನು ಕೇರಳಕ್ಕೆ ಅಕ್ರಮವಾಗಿ ಸಾಗಿಸಲಾಗುತ್ತಿತ್ತು ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ಕೃಷಿ ಪರಿಕರಗಳ ಅಕ್ರಮ ವ್ಯಾಪಾರ ಮತ್ತು ಅಕ್ರಮ ಸಾಗಾಟದ ವಿರುದ್ಧ ಕಠಿಣಕ್ರಮ ಕೈಗೊಳ್ಳುವಂತೆ ಕೃಷಿ ಸಚಿವ ಪಿ.ಎಂ.ನರೇಂದ್ರ ಸ್ವಾಮಿ ನೀಡಿದ ಸೂಚನೆ ಮೇರೆಗೆ ಇಲಾಖೆಯ ಅಧಿಕಾರಿಗಳು ತಡರಾತ್ರಿ ದಾಳಿ ನಡೆಸಿದ್ದಾರೆ. ಇಲಾಖೆಯ ಮಾಹಿತಿ ಪ್ರಕಾರ ಕಳೆದ ಒಂದು ತಿಂಗಳಲ್ಲಿ ಬೀಜಗಳು, ರಸಗೊಬ್ಬರ ಮತ್ತು ಕೀಟನಾಶಕಗಳು ಸೇರಿದಂತೆ ಒಟ್ಟು ಎರಡು ಕೋಟಿ ೮೮ ಲಕ್ಷ ರೂಪಾಯಿ ಮೌಲ್ಯದ ಕೃಷಿ ಪರಿಕರಗಳನ್ನು ಜಪ್ತಿ ಮಾಡಲಾಗಿದೆ. ನಿಯಮ ಉಲ್ಲಂಘನೆಗೆ ಸಂಬಂಧಿಸಿದಂತೆ ಒಟ್ಟು ೪೯ ಪ್ರಕರಣಗಳನ್ನು ದಾಖಲಿಸಲಾಗಿದೆ. ಒಂದು ಕೋಟಿ ೮೯ ಲಕ್ಷ ರೂಪಾಯಿ ಮೌಲ್ಯದ ೪೮೭.೮ ಮೆಟ್ರಿಕ್ ಟನ್ ರಸಗೊಬ್ಬರವನ್ನು ಕೃಷಿ ಇಲಾಖೆ ಈವರೆಗೆ ಜಪ್ತಿ ಮಾಡಿದೆ.

<><><>

ಹಾಸನ ಹೊರ ವಲಯದ ರಾಷ್ಟ್ರೀಯ ಹೆದ್ದಾರಿ-೭೫ರಲ್ಲಿ ಪೆಟ್ರೋಲ್ ತುಂಬಿದ್ದ ಟ್ಯಾಂಕರ್ ಪಲ್ಟಿಯಾಗಿ ಸಾವಿರಾರು ಲೀಟರ್ ಇಂಧನ ರಸ್ತೆಯಲ್ಲೇ ಹರಿದಿದೆ. ಕೆಂಚಟ್ಟಹಳ್ಳಿ ಮೇಲ್ಸೇತುವೆ ಮೇಲೆ ಈ ಘಟನೆ ಸಂಭವಿಸಿದ್ದು, ಸ್ಥಳದಲ್ಲಿ ಕೆಲಕಾಲ ಸಂಚಾರಕ್ಕೆ ಅಡಚಣೆ ಉಂಟಾಗಿತ್ತು. ತಮಿಳುನಾಡಿನಿಂದ ಹಾಸನದ ಹೆಚ್.ಪಿ.ಸಂಸ್ಥೆಗೆ ಆಗಮಿಸುತ್ತಿದ್ದ ಈ ಲಾರಿಯಲ್ಲಿ ಸುಮಾರು ೪೦೦ ಲೀಟರ್ ಎಥೆನಾಲ್ ಸಾಗಿಸಲಾಗುತ್ತಿತ್ತು. ಲಾರಿ ಉರುಳಿಬಿದ್ದಿದ್ದರಿಂದ ಚಾಲಕನಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಪೊಲೀಸರು ಹಾಗೂ ಅಗ್ನಿಶಾಮಕ ದಳದ ನೆರವಿನಿಂದ ಲಾರಿಯನ್ನು ತೆರವುಗೊಳಿಸಿ ಸುಗಮ ರಸ್ತೆ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ.

<><><>

ಪೂರ್ವವಲಯ ವ್ಯಾಪ್ತಿಯಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದರ ಜೊತೆಗೆ ಮುಂಬರುವ ಹಬ್ಬಗಳ ಹಿನ್ನೆಲೆಯಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ ಭದ್ರತೆಗೆ ಮೊದಲ ಆದ್ಯತೆ ನೀಡಲಾಗುವುದು ಎಂದು ನೂತನ ಐಜಿಪಿ ಎನ್.ಸತೀಶ್ ಕುಮಾರ್ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಅಧಿಕಾರ ವಹಿಸಿಕೊಂಡ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೧೧೨ ತುರ್ತು ಸೇವಾ ಸಹಾಯವಾಣಿಯ ದಕ್ಷತೆಯನ್ನು ಇನ್ನಷ್ಟು ಹೆಚ್ಚಿಸಿ ಸಾರ್ವಜನಿಕರಿಗೆ ಶೀಘ್ರ ನೆರವು ದೊರೆಯುವಂತೆ ನೋಡಿಕೊಳ್ಳಲಾಗುವುದು ಎಂದು ಹೇಳಿದ್ದಾರೆ. ಬೆಂಗಳೂರಿನ ಮಾದರಿಯಲ್ಲೇ ಸಾರ್ವಜನಿಕರ ಕರೆಗಳಿಗೆ ತಕ್ಷಣವೇ ಸ್ಪಂದಿಸುವ ವ್ಯವಸ್ಥೆಯನ್ನು ಬಲಪಡಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಸೈಬರ್ ಅಪರಾಧಗಳು, ಬಿಟ್ ಕಾಯಿನ್ ಮಾದರಿಯ ಹಣಕಾಸು ವಂಚನೆಯ ಬಗ್ಗೆ ಜನರಲ್ಲಿ ಅರಿವು ಮೂಡಿಸಲಾಗುವುದು ಎಂದು ತಿಳಿಸಿದ್ದಾರೆ.

<><><><>

ವಿಜಯಪುರ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ೨೦೨೫-೨೬ನೇ ಸಾಲಿನಲ್ಲಿ ದಾಖಲೆ ಪ್ರಮಾಣದ ಸಾಧನೆ ಮಾಡಿದೆ. ೮ ಸಾವಿರದ ೭೬ ಕೋಟಿ ರೂಪಾಯಿ ದಾಖಲೆಯ ವಹಿವಾಟು ನಡೆಸಿದ್ದು, ಒಟ್ಟು ೨೯ ಕೋಟಿ ೧೬ ಲಕ್ಷ ರೂಪಾಯಿ ನಿವ್ವಳ ಲಾಭ ಗಳಿಸುವ ಮೂಲಕ ಬ್ಯಾಂಕಿನ ಇತಿಹಾಸದಲ್ಲೇ ಹೊಸ ಮೈಲುಗಲ್ಲು ಸ್ಥಾಪಿಸಿದೆ ಎಂದು ಮಾಜಿ ಸಚಿವ ಹಾಗೂ ಬ್ಯಾಂಕಿನ ಅಧ್ಯಕ್ಷ ಶಿವಾನಂದ ಪಾಟೀಲ್ ತಿಳಿಸಿದ್ದಾರೆ. ವಿಜಯಪುರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೦೨೫-೨೬ನೇ ಹಣಕಾಸು ವರ್ಷದಲ್ಲಿ ಬ್ಯಾಂಕ್ ಅತ್ಯುತ್ತಮ ಪ್ರಗತಿ ಸಾಧಿಸಿದೆ. ಅಂದಾಜು ೨ ಲಕ್ಷ ೫೫ ಸಾವಿರ ರೈತರಿಗೆ ೨ ಸಾವಿರದ ೧೧೫ ಕೋಟಿ ರೂಪಾಯಿ ಕೃಷಿ ಸಾಲ ನೀಡುವ ಮೂಲಕ ಬ್ಯಾಂಕ್ ಇತಿಹಾಸ ನಿರ್ಮಿಸಿದೆ ಎಂದು ಹೇಳಿದ್ದಾರೆ. ಜಿಲ್ಲೆಯಾದ್ಯಂತ ಕಾರ್ಯಕ್ಷೇತ್ರ ಹೊಂದಿರುವ ಬ್ಯಾಂಕ್ ಗ್ರಾಮೀಣ, ಪಟ್ಟಣ ಹಾಗೂ ನಗರ ಪ್ರದೇಶಗಳಲ್ಲಿ ಒಟ್ಟು ೫೧ ಶಾಖೆಗಳನ್ನು ಹೊಂದಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಭವಿಷ್ಯದ ಪೀಳಿಗೆಗಾಗಿ ಜಲಮೂಲಗಳನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಸಾಮಾಜಿಕ ಜವಾಬ್ದಾರಿಯಾಗಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಮಂಡ್ಯದಲ್ಲಿಂದು ಅಂತರ್ಜಲ ಸಂರಕ್ಷಣೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಆಯೋಜಿಸಿದ್ದ ಜಲ ನಡಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಆಧುನಿಕ ಜೀವನಶೈಲಿ, ನೈಸರ್ಗಿಕ ಸಂಪನ್ಮೂಲಗಳ ಅತಿಯಾದ ಬಳಕೆ ಹಾಗೂ ಅಂತರ್ಜಲದ ಮಿತಿಮೀರಿದ ಶೋಷಣೆಯಿಂದಾಗಿ ಅಂತರ್ಜಲ ಮಟ್ಟ ಕುಸಿಯುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಅಭಿಪ್ರಾಯಪಟ್ಟರು. ಈ ಹಿನ್ನೆಲೆಯಲ್ಲಿ ಜಲ ಸಂರಕ್ಷಣೆಗೆ

ಪ್ರತಿಯೊಬ್ಬರೂ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಕರೆ ನೀಡಿದ್ದಾರೆ. ಮಳೆನೀರನ್ನು ಭೂಮಿಯಲ್ಲಿ ಇಂಗಿಸುವ ಮೂಲಕ ಅಂತರ್ಜಲ ಮರುಪೂರಣಕ್ಕೆ ಒತ್ತು ನೀಡಬೇಕು. ಮನೆಗಳು ಹಾಗೂ ಕಟ್ಟಡಗಳಲ್ಲಿ ಮಳೆನೀರು ಕೊಯ್ಲು ವ್ಯವಸ್ಥೆ ಅಳವಡಿಸಿಕೊಳ್ಳುವುದು, ನೀರನ್ನು ಮಿತವಾಗಿ ಬಳಸುವುದು ಹಾಗೂ ವ್ಯರ್ಥವಾಗುವುದನ್ನು ತಡೆಯುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ತಿಳಿಸಿದ್ದಾರೆ.

<><><>

ಬೆಳಗಾವಿ ಜಿಲ್ಲೆ ಖಾನಾಪೂರ ತಾಲೂಕಿನ ಲೋಕೋಳಿ ಗ್ರಾಮ ಪಂಚಾಯಿತಿಗೆ ನಿನ್ನೆ ನವದೆಹಲಿಯ ಐಇಐಸಿ ತಂಡದ ಸದಸ್ಯರಾದ ಸಂಜುಲಿ ಗುಪ್ತಾ ಹಾಗೂ  ಸತೀಶ್ ಬಜ್ರಾಚಾರ್ಯ ಅವರನ್ನು ಒಳಗೊಂಡ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿತು. ಈ ವೇಳೆ, ವಿಕಸಿತ ಭಾರತ-ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಆಜೀವಿಕಾ ಮಿಷನ್, ವಿಕಸಿತ ಭಾರತ ಜಿ ರಾಮ್ ಜಿ ಯೋಜನೆಯ ಅನುಷ್ಠಾನದ ಕುರಿತು ಅಧಿಕಾರಿಗಳು ಪರಿಶೀಲನೆ ನಡೆಸಿದರು. ಕೂಲಿ ಕಾರ್ಮಿಕರೊಂದಿಗೆ ಸಂವಾದ ನಡೆಸಿ, ಜಾಬ್ ಕಾರ್ಡ್ ಮೂಲಕ ಕೆಲಸ ಪಡೆಯುತ್ತಿರುವ ವಿಧಾನ, ಕೆಲಸದಲ್ಲಿ ಅವರ ಭಾಗವಹಿಸುವಿಕೆ ಹಾಗೂ ಯೋಜನೆಯಡಿ ದೊರೆಯುತ್ತಿರುವ ಸೌಲಭ್ಯಗಳ ಕುರಿತು ಮಾಹಿತಿ ಪಡೆದುಕೊಂಡರು. ನಂತರ ಗ್ರಾಮ ಪಂಚಾಯಿತಿಯಲ್ಲಿ ವಿಕಸಿತ ಭಾರತ ಜಿ ರಾಮ್ ಜಿ ಯೋಜನೆಗೆ ಸಂಬಂಧಿಸಿದ ರೋಜ್‌ಗಾರ್ ಗ್ಯಾರಂಟಿ ಕಾರ್ಡ್‌ಗಳು, ವಿವಿಧ ದಾಖಲಾತಿಗಳು ಕಾಮಗಾರಿ ಕಡತಗಳು ಹಾಗೂ ಇತರ ದಾಖಲೆಗಳನ್ನು ಪರಿಶೀಲಿಸಿದರು.

<><><>

ತಮಿಳುನಾಡಿನ ಮೆಟ್ಟೂರು ಅಣೆಕಟ್ಟೆಗೆ ಒಳಹರಿವು ತೀವ್ರ ಕುಸಿತ ಕಂಡಿದೆ. ಇದರಿಂದಾಗಿ ಕಾವೇರಿ ಜಲಾನಯನ ಪ್ರದೇಶದ ರೈತರಲ್ಲಿ ಸಾಂಬಾ ಭತ್ತದ ಕೃಷಿಗೆ ನೀರಿನ ಲಭ್ಯತೆಯ ಬಗ್ಗೆ ಆತಂಕ ಮೂಡಿಸಿದೆ. ಕರ್ನಾಟಕದಿಂದ ತಮಿಳುನಾಡಿಗೆ ೧೫ ದಿನಗಳ ಕಾಲ ಪ್ರತಿದಿನ ೭ ಸಾವಿರ ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡುವಂತೆ ಕಾವೇರಿ ನೀರು ನಿಯಂತ್ರಣಾ ಸಮಿತಿ ನೀಡಿದ್ದ ನಿರ್ದೇಶನವನ್ನು ಪ್ರಾಧಿಕಾರ ಎತ್ತಿ ಹಿಡಿದ ಕೆಲವೇ ದಿನಗಳಲ್ಲಿ ಈ ಕುಸಿತ ಉಂಟಾಗಿದೆ.

<><><>

ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ಮಡಿವಾಳ ಕೆರೆಯ ಆವರಣದಲ್ಲಿ ಇಂದು ಪರಿಸರ ಸಂರಕ್ಷಣೆ ಹಾಗೂ ಜಲಮೂಲಗಳ ಸ್ವಚ್ಛತೆಯ ನಿಟ್ಟಿನಲ್ಲಿ ಪಾಲಿಕೆ ಹಾಗೂ 'ದಿ ಇಂಡಿಯನ್ ಪ್ಲಾಗರ್ಸ್ ಆರ್ಮಿ' ಮತ್ತು ಖಾಸಗಿ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳ ಸಹಯೋಗದೊಂದಿಗೆ ಬೃಹತ್ ಪ್ಲಾಗಿಂಗ್ ಅಭಿಯಾನಕ್ಕೆ ಪಾಲಿಕೆ ಆಯುಕ್ತ ಕೆ.ಎನ್.ರಮೇಶ್ ಚಾಲನೆ ನೀಡಿದರು. ಈ ವೇಳೆ ೭೫ ನಿಮಿಷಗಳಲ್ಲಿ ಸುಮಾರು ೧೨೦ ಕೆ.ಜಿ ಪ್ಲಾಸ್ಟಿಕ್ ತ್ಯಾಜ್ಯ ಸಂಗ್ರಹಿಸಲಾಯಿತು. ಈ ವಿಶೇಷ ಸ್ವಚ್ಛತಾ ಅಭಿಯಾನದಲ್ಲಿ ೪೩ ಮಂದಿ ಪ್ಲಾಗರ್‌ಗಳು ಹಾಗೂ ವಿದ್ಯಾರ್ಥಿಗಳು ಕೇವಲ ೭೫ ನಿಮಿಷಗಳಲ್ಲಿ

ಕೆರೆಯ ಸುತ್ತಮುತ್ತಲಿನ ೧೦೦ ಮೀಟರ್ ವ್ಯಾಪ್ತಿಯಲ್ಲಿ  ಪ್ಲಾಸ್ಟಿಕ್ ಬಾಟಲ್ ಗಳು, ಹಾಲಿನ ಪ್ಯಾಕೆಟ್‌ಗಳು, ಸೇರಿದಂತೆ ಒಟ್ಟು ೧೨೦ ಕೆ.ಜಿ ಏಕಬಳಕೆಯ ಪ್ಲಾಸ್ಟಿಕ್ ತ್ಯಾಜ್ಯವನ್ನು ಸಂಗ್ರಹಿಸಿದರು.

<><><><>

<u>ಸಂಕ್ಷಿಪ್ತ ಸುದ್ದಿಗಳು</u>

1. ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಇದೇ ೧೫ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ವಿಧಾನಸೌಧದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉದ್ಘಾಟಿಸಲಿದ್ದಾರೆ.

2. 'ಬಾಗಿಲಿಗೆ ಬಂತು ಸರ್ಕಾರ; ಸೇವೆಗೆ ಇರಲಿ ಸಹಕಾರ' ಎನ್ನುವ ಸಂದೇಶದ ಕೊಪ್ಪಳ ತಾಲೂಕು ಹೋಬಳಿ ಮಟ್ಟದ ಪ್ರಜಾಸೇವಾ ಆಂದೋಲನ ಸಭೆಗೆ ಸಂಸದ ಕೆ ರಾಜಶೇಖರ ಹಿಟ್ನಾಳ ಅವರು ಇಂದು ಚಾಲನೆ ನೀಡಿದರು.

3. ಗಣೇಶ ಹಬ್ಬದ ಪ್ರಯುಕ್ತ ಮೂರ್ತಿಗಳ ಮೆರವಣಿಗೆ ವೇಳೆ ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಕೋಲಾರ ಜಿಲ್ಲೆಯ ಪ್ರಮುಖ ನಗರಗಳ ವ್ಯಾಪ್ತಿಯಲ್ಲಿ ಇದೇ ೧೪ರಂದು ಮದ್ಯ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಿ ಕೋಲಾರ ಜಿಲ್ಲಾಧಿಕಾರಿ ಎಂ.ಆರ್.ರವಿಕುಮಾರ್ ಆದೇಶ ಹೊರಡಿಸಿದ್ದಾರೆ.

><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>